ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಶುಕ್ರವಾರ, ದಿನಾಂಕ : 13 ನೇ ಮಾರ್ಚ್, 2020

ಕಳೆದ 3 ವರ್ಷಗಳಲ್ಲಿ ಮಂಜೂರಾಗಿರುವ ಶುದ್ಧ ಕುಡಿಯುವ ನೀರಿನ ಘಟಕಗಳ ಕುರಿತು

ಶ್ರೀ ಹೆಚ್. ಎಂ. ರಮೇಶ್ ಗೌಡ(ವಿಧಾನಸಭೆಯಿಂದ ಚುನಾಯಿತರಾದವರು):-

886 (1103) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕಳೆದ 3 ವರ್ಷಗಳಲ್ಲಿ ರಾಜ್ಯದಲ್ಲಿ ಮಂಜೂರು ಆಗಿರುವ ಶುದ್ಧ ಕುಡಿಯುವ ನೀರಿನ ಘಟಕಗಳ ಸಂಖ್ಯೆ ಎಷ್ಟು ; ಕಾರ್ಯಾರಂಭ ಮಾಡಿರುವ ಘಟಕಗಳ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಆ) ಈಗಾಗಲೇ ನಿರ್ಮಿಸಿರುವ ಶುದ್ಧ ಕುಡಿಯುವ ನೀರಿನ ಘಟಕಗಳಲ್ಲಿ ದುರಸ್ಥಿಗೆ ಎಷ್ಟು ಘಟಕಗಳು ಬಂದಿರುತ್ತವೆ ; (ವಿವರ ನೀಡುವುದು)

(ಇ) ಶುದ್ಧ ಕುಡಿಯುವ ನೀರಿನ ಘಟಕಗಳನ್ನು ಸ್ಥಾಪನೆ ಮಾಡಲು ಇರುವ ಮಾನದಂಡಗಳೇನು ;

(ಈ) ಶುದ್ಧ ಕುಡಿಯುವ ನೀರಿನ ಘಟಕಗಳ ನಿರ್ವಹಣೆಯನ್ನು ನಿರ್ವಹಿಸುವವರು ಯಾರು ?